ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 443

2 ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ. (ವಿಧಾನಸಭೆಯಿಂದ ಚುನಾಯಿತರಾದವರು)

3 ಉತ್ತರಿಸುವ ದಿನಾಂಕ : 16-12-2021

4 ಉತ್ತರಿಸುವವರು : ಮುಖ್ಯಮಂತ್ರಿಗಳು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ವೃಷಭಾವತಿ ನದಿ ಪುನಶ್ಚೇತನ ಮತ್ತು ಸಂರಕ್ಷಣೆ ಬಗ್ಗೆ ರಾಷ್ಟ್ರೀಯ ಪರಿಸರ ಇಂಜಿನಿಯರಿಂಗ್ ಸಂಸ್ಥೆ ರವರು ನೀಡಿರುವ ವರದಿಯಲ್ಲಿನ ಶಿಫಾರಸ್ಸುಗಳನ್ನು ಆಧರಿಸಿ ವೃಷಭಾವತಿ ನದಿ ಪುನಶ್ಚೇತನ ಮತ್ತು ಸಂರಕ್ಷಣೆ ಬಗ್ಗೆ ಸರ್ಕಾರದಿಂದ ಕ್ರಿಯಾಯೋಜನೆ ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಸದರಿ ಕ್ರಿಯಾಯೋಜನೆ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳು ಹಾಲಿ ಯಾವ ಹಂತದಲ್ಲಿವೆ;	ವೃಷಭಾವತಿ ನದಿ ಪುನಶ್ಚೇತನ ಮತ್ತು ಸಂರಕ್ಷಣೆ ಬಗ್ಗೆ ಅಧ್ಯಯನ ನಡೆಸಿ ವರದಿ ನೀಡಲು ಮಾನ್ಯ ಉಚ್ಚ ನ್ಯಾಯಾಲಯದ ನಿರ್ದೇಶನದನುಸಾರ NEERI ಸಂಸ್ಥೆಯನ್ನು ನೇಮಿಸಲಾಗಿರುತ್ತದೆ. ಸದರಿ ಸಂಸ್ಥೆಯು ವೃಷಭಾವತಿ ನದಿ ಪುನಶ್ಚೇತನ ಮತ್ತು ಸಂರಕ್ಷಣೆ ಬಗ್ಗೆ ಅಗತ್ಯವಿರುವ ಪರೀಕ್ಷೆಗಳನ್ನು ನಡೆಸಿದ್ದು, ಪ್ರಸ್ತುತ ಸದರಿ ಸಂಸ್ಥೆಯು ಮಧ್ಯಂತರ ವರದಿ ಸಲ್ಲಿಸಿದ್ದು, ಅಂತಿಮ ವರದಿಯನ್ನು ಸಲ್ಲಿಸಬೇಕಾಗಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ನಿರ್ದೇಶನದ ಮೇರೆಗೆ ಮಧ್ಯಂತರ ವರದಿಯನುಸಾರ ಅಲ್ಪಾವಧಿ ಮತ್ತು ದೀರ್ಘಾವಧಿ ಕ್ರಮಗಳನ್ನು ಕೈಗೊಳ್ಳಲು ಬಿಬಿಎಂಪಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮತ್ತು ಇತರ ಸಂಸ್ಥೆ / ಇಲಾಖೆಗಳಿಗೆ ನಿರ್ದೇಶನಗಳನ್ನು ನೀಡಲಾಗಿದೆ. NEERI ಸಂಸ್ಥೆಯವರಿಂದ ಅಂತಿಮ ವರದಿ ಸ್ವೀಕೃತವಾದ ನಂತರ, ಸದರಿ ವರದಿಯನ್ನು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸಿ, ಮಾನ್ಯ ನ್ಯಾಯಾಲಯದ ಆದೇಶದ ಅನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ. NEERI ಸಂಸ್ಥೆಯು ಸಲ್ಲಿಸಿರುವ ಮಧ್ಯಂತರ ವರದಿಯಲ್ಲಿನ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಅಗತ್ಯವಾದ ಕ್ರಿಯಾಯೋಜನೆ ತಯಾರಿಸಿ ಸಲ್ಲಿಸುವಂತೆ ಬಿಬಿಎಂಪಿ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮತ್ತು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಾಗು ಇತರ ಸಂಸ್ಥೆಗಳಿಗೆ ಸೂಚಿಸಲಾಗಿದೆ.
ಆ	ವೃಷಭಾವತಿ ನದಿ ಪಾತ್ರದ ಜಾಗದಲ್ಲಿ ಆಗಿರುವ ಒತ್ತುವರಿಗಳನ್ನು ಗುರುತಿಸಿ ತೆರವುಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?	ವೃಷಭಾವತಿ ನದಿ ಪಾತ್ರದಲ್ಲಿ ಒತ್ತುವರಿಯಾಗಿರುವ ಜಾಗಗಳನ್ನು ಗುರುತಿಸಿ ಹಂತಹಂತವಾಗಿ ತೆರವುಗೊಳಿಸಲಾಗುತ್ತಿರುತ್ತದೆ. ಉಳಿದಂತೆ, ಬಾಕಿ ಇರುವ ಒತ್ತುವರಿಗಳನ್ನು ಗುರುತಿಸಲು ಕಂದಾಯ ಇಲಾಖೆಯಿಂದ ಭೂಮಾಪಕರನ್ನು ನಿಯೋಜಿಸುವಂತೆ ಕೋರಲಾಗಿದ್ದು, ಸರ್ವೆ ಕಾರ್ಯ ಪೂರ್ಣಗೊಂಡ ನಂತರದಲ್ಲಿ ಒತ್ತುವರಿ ತೆರವುಗೊಳಿಸಲು ಕ್ರಮಕೈಗೊಳ್ಳಲಾಗುತ್ತದೆ.

ಸಂಖ್ಯೆ: ನಅಇ 359 ಎಂಎನ್‌ವೈ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ